# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 500 |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್‌ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

<table>
<tr><th>ಪ್ರಶ್ನೆ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಅಪರಾಧ ಕೃತ್ಯವೆಸಗಿ ಬಂಧನಕ್ಕೊಳಗಾದ ಆರೋಪಿಗಳು ಜೈಲಿನಲ್ಲಿಯೂ ಐಷಾರಾಮಿ ಜೀವನ ನಡೆಸುತ್ತಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾಗಿದ್ದು, ಮೊಬೈಲ್ ಫೋನ್, ಗಾಂಜಾ ಹಾಗೂ ಮಾದಕ ವಸ್ತುಗಳು ಖೈದಿಗಳಿಗೆ ಸುಲಭವಾಗಿ ಸಿಗುತ್ತಿದ್ದು ಇದರಿಂದ ಪೊಲೀಸ್ ಮತ್ತು ಜೈಲು ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಕರ್ತವ್ಯಲೋಪ ಎದ್ದು ಕಾಣುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ಹೌದು<br><br>1) ರಾಜ್ಯದ ಕಾರಾಗೃಹಗಳಲ್ಲಿ ಮೊಬೈಲ್ ಹಾಗೂ ಇನ್ನಿತರೆ ನಿಷೇಧಿತ ವಸ್ತುಗಳು ದೊರೆತಿರುವ ಪ್ರಕರಣಗಳಲ್ಲಿ ಕಳೆದ 2 ವರ್ಷಗಳಲ್ಲಿ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕೈಗೊಳ್ಳಲಾದ ಕ್ರಮಗಳ ವಿವರ ಕೆಳಕಂಡಂತಿದೆ–<br><br>
<table>
<tr><th>ವರ್ಷ</th><th>ಇಲಾಖಾ ವಿಚಾರಣೆಯ ಪ್ರಕರಣಗಳ ಸಂಖ್ಯೆ</th><th>ಕರ್ತವ್ಯಲೋಪವೆಸಗಿ ಇಲಾಖಾ ವಿಚಾರಣೆಗೊಳಪಡಿಸಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ</th><th>ನಿಲಂಬನಗೊಳಿಸಲಾದ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ</th><th>ಸೇವೆಯಿಂದ ವಜಾಗೊಂಡ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ</th></tr>
<tr><td>2021</td><td>17</td><td>43</td><td>05</td><td>0</td></tr>
<tr><td>2022</td><td>08</td><td>79</td><td>16</td><td>04</td></tr>
<tr><td>ಒಟ್ಟು</td><td>25</td><td>122</td><td>21</td><td>04</td></tr>
</table>
</td></tr>
<tr><td>ಆ)</td><td>ಹಾಗಿದ್ದಲ್ಲಿ, ಈ ಕುರಿತಂತೆ ಸರ್ಕಾರ ಕೈಗೊಂಡಿರುವ ಕಠಿಣ ಕ್ರಮವೇನು? (ವಿವರ ನೀಡುವುದು)</td><td>2) ಕರ್ನಾಟಕ ಕಾರಾಗೃಹಗಳ ಅಧಿನಿಯಮ 1963 ರ 42 ನೇ ಪ್ರಕರಣದಲ್ಲಿ ಮೊಬೈಲ್ ಮತ್ತು ಯಾವುದೇ ಸಂಪರ್ಕ ಸಾಧನ ಬಳಕೆ ಮಾಡುವ ಬಂದಿಗಳ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳುವ ಸಲುವಾಗಿ ಅಗತ್ಯ ತಿದ್ದುಪಡಿಯನ್ನು ಮಾಡಿ ದಿನಾಂಕ: 05–04–2022 ರಲ್ಲಿ ಸರ್ಕಾರವು ಆದೇಶವನ್ನು ಹೊರಡಿಸಿ, ಕರ್ನಾಟಕ ಕಾರಾಗೃಹಗಳ (ತಿದ್ದುಪಡಿ) ಅಧಿನಿಯಮ 2022 ನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. ಅದರಂತೆ ಕಾರಾಗೃಹಗಳಲ್ಲಿ ಮೊಬೈಲ್ ಮತ್ತು ಯಾವುದೇ ಸಂಪರ್ಕ ಸಾಧನ ಬಳಕೆ ಮಾಡುವ ಬಂದಿಗಳ ವಿರುದ್ಧ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.</td></tr>
</table>

| | | |
|---|---|---|
| | | 3) ಕಾರಾಗೃಹಗಳಲ್ಲಿ ಮೊಬೈಲ್ ಪೋನ್‌ಗಳನ್ನು ಮತ್ತು ಇತರೆ ಯಾವುದೇ ರೀತಿಯ ನಿಷೇಧಿತ ವಸ್ತುಗಳ ಕಳ್ಳ ಸಾಗಾಣಿಕೆಯನ್ನು ಹಾಗೂ ಅಪರಾಧ ಚಟುವಟಿಕೆಗಳನ್ನು ತಡೆಗಟ್ಟುವ ಸಲುವಾಗಿ ಕಾರಾಗೃಹದೊಳಗೆ ಪ್ರವೇಶಿಸುವ ಮತ್ತು ಹೊರಬರುವ ವ್ಯಕ್ತಿಗಳನ್ನು ಹಾಗೂ ವಸ್ತುಗಳನ್ನು ಪರಿಶೀಲಿಸಲು ಅತ್ಯಾಧುನಿಕ ಮಾದರಿಯ ತಪಾಸಣಾ ಉಪಕರಣಗಳಾದ X-ray Baggage Scanner, FG-1 Security Pole, Hand Held Metal Detector(HHMD), Door Frame Metal Detector(DFMD), Deep Search Metal Detector (DSMD) ಹಾಗೂ Non Linear Junction Detector(NLJD) ಒದಗಿಸಲಾಗಿರುತ್ತದೆ.<br><br>4) ರಾಜ್ಯದ 8 ಕೇಂದ್ರ ಕಾರಾಗೃಹ ಮತ್ತು ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆಯನ್ನು ನಿಯೋಜಿಸಲಾಗಿದ್ದು, ಸದರಿಯವರಿಂದ ಕಾರಾಗೃಹದೊಳಗೆ ಪ್ರವೇಶಿಸುವ ಮತ್ತು ಹೊರಬರುವ ವ್ಯಕ್ತಿಗಳನ್ನು ಹಾಗೂ ವಸ್ತುಗಳನ್ನು ನಿಯಮಿತವಾಗಿ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 23 ಪಿಆರ್‌ಇ 2023

(ಆರಗ ಜ್ಞಾನೇಂದ್ರ)
ಗೃಹ ಸಚಿವರು